**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 18 |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ ಐವನ್ ಡಿ' ಸೋಜಾ |
| 3 | ಉತ್ತರಿಸಬೇಕಾದ ದಿನಾಂಕ | 09.12.2024 |
| 4 | ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ರಾಜ್ಯದಲ್ಲಿ ಒಟ್ಟು 24 ಸರ್ಕಾರಿ ವೈದ್ಯಕೀಯ ಕಾಲೇಜುಗಳಿರುತ್ತವೆ. ಜಿಲ್ಲಾವಾರು ಹಾಗೂ ವರ್ಷವಾರು ವಿವರಗಳನ್ನು ಅನುಬಂಧದಲ್ಲಿ ನೀಡಿದೆ.<br>ರಾಜ್ಯದ ಪ್ರತಿ ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸ ಬೇಕೆಂಬುದು ಸರ್ಕಾರದ ನೀತಿಯಾಗಿರುತ್ತದೆ.<br>ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00ಕೋಟಿಗಳ ಅನಾವರ್ತಕ ವೆಚ್ಚ ಹಾಗೂ 60.00ಕೋಟಿಗಳ ಆವರ್ತಕ ವೆಚ್ಚ ಅವಶ್ಯಕತೆ ಇರುತ್ತದೆ.<br>ಅದರಂತೆ, ಅನುದಾನದ ಲಭ್ಯತೆಯನ್ನು ಆಧರಿಸಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಹೊಂದಿರದ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಪರಿಶೀಲಿಸಲಾಗುವುದು. ಪ್ರಸ್ತುತದಲ್ಲಿ ರಾಜ್ಯ ಸರ್ಕಾರದ ವತಿಯಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಬಾಕಿ ಇರುವುದಿಲ್ಲ.<br>ವೈದ್ಯಕೀಯ ಕಾಲೇಜುಗಳು ಇಲ್ಲದ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವ ಬಗ್ಗೆ ಪೂರ್ವಭಾವಿ ಸಭೆಯನ್ನು ನಡೆಸಲಾಗಿದೆ. |
| ಆ) | ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ; | |
| ಇ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಎಲ್ಲಾ ಮೂಲಭೂತ ಸೌಕರ್ಯಗಳಿದ್ದರೂ ಸಹ ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು;(ವಿವರ ನೀಡುವುದು) | |
| ಈ) | ಯಾವ ಕಾಲಮಿತಿಯೊಳಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸ ವೈದ್ಯಕೀಯ ಕಾಲೇಜು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು? | |

**ಸಂಖ್ಯೆ:ಎಂಇಡಿ 572 ಎಂಎಂಸಿ 2024**

**(ಡಾ|| ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

# ಅನುಬಂಧ-1

| ಕ್ರ ಸಂ | ಕಾಲೇಜು / ಸಂಸ್ಥೆಯ ಹೆಸರು | ಪ್ರಾರಂಭವಾದ ವರ್ಷ |
|---|---|---|
| 1. | ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ, ಬೆಂಗಳೂರು. | 1955 |
| 2. | ಮೈಸೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ, ಮೈಸೂರು | 1924 |
| 3. | ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ | 1957 |
| 4. | ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬಳ್ಳಾರಿ | 1962 |
| 5. | ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ | 2007 |
| 6. | ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು | 2007-08 |
| 7. | ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ | 2005 |
| 8. | ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ | 2007 |
| 9. | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ | 2005-06 |
| 10. | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ | 2006 |
| 11. | ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ | 2014-15 |
| 12. | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ, ಕೊಡಗು | 2014 |
| 13. | ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗುಲ್ಬರ್ಗಾ | 2013-14 |
| 14. | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ | 2015 |
| 15. | ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ | 2014-15 |
| 16. | ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ. | 2016 |
| 17. | ಶ್ರೀ ಅಟಲ್ ಬಿಹಾರಿ ವಾಜಪೇಯಿ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ, ಬೆಂಗಳೂರು. | 2019-20 |
| 18. | ಚಿಕ್ಕಬಳ್ಳಾಪುರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿಕ್ಕಬಳ್ಳಾಪುರ. | 2021-22 |
| 19. | ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾವೇರಿ. | 2022-23 |
| 20. | ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಯಾದಗಿರಿ. | 2022-23 |
| 21. | ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಚಿಕ್ಕಮಗಳೂರು | 2022-23 |
| 22. | ಚಿತ್ರದುರ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿತ್ರದುರ್ಗ | 2023-24 |
| 23. | ESIC ಬೆಂಗಳೂರು | 2012 |
| 24. | ESIC ಕಲಬುರಗಿ | 2013 |